ನಿ-330-ಎ 02/021 7 UKK 06

**ಕರ್ನಾಟಕ ವಿಧಾನ ಪರಿಷತ್ತಿನ ಶಾಸಕರು, ಶ್ರೀಮತಿ ಹೇಮಲತಾ ನಾಯಕ ಇವರು ನಿಯಮ 330-ಎ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಮೇಲಿನ ಹೇಳಿಕೆ**.

**ಸೂಚನೆ:**

ಕೋಳಿ ತ್ಯಾಜ್ಯಕ್ಕೆ ರೋಸಿಹೋದ ಸಾರ್ವಜನಿಕರು, ನವಲಿಯಲ್ಲಿ ತ್ಯಾಜ್ಯಗಳನ್ನು ರಸ್ತೆ ಪಕ್ಕ ಹಾಕಿರುವುದು.

ನವಲಿ ಗ್ರಾಮದ ಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಮುಂಭಾಗದಲ್ಲಿ ಘನ ತ್ಯಾಜ್ಯ ಹಾಗೂ ಕೋಳಿ ತ್ಯಾಜ್ಯ ರಸ್ತೆ ಮೇಲೆ ಬಿಸಾಡುತ್ತಿರುವುದರಿಂದ ಸಾರ್ವಜನಿಕರು, ಗ್ರಾಮಸ್ಥರು ಗ್ರಾಪಂ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಾಂಸದಂಗಡಿಗಳಲ್ಲಿ ಸಂಗ್ರಹಗೊಂಡಿರುವ ಕೋಳಿ ತ್ಯಾಜ್ಯ ಕಾರಟಗಿ ಮುಖ್ಯ ರಸ್ತೆಯಲ್ಲಿ ಬಿಸಾಡುತ್ತಿದ್ದಾರೆ. ಇದೇ ರಸ್ತೆಗೆ ಹೊಂದಿಕೊಂಡು ಶಾಲಾ ಕಾಲೇಜುಗಳಿದ್ದು, ಯಾರು ಇಲ್ಲದ ಸಮಯ ನೋಡಿ ತ್ಯಾಜ್ಯ ಹಾಕುತ್ತಿರುವುದರಿಂದ ದುರ್ವಾಸನೆ ಬಿರುತ್ತಿದೆ. ಇದರಿಂದ ಸಾರ್ವಜನಿಕರು, ಗ್ರಾಮಸ್ಥರು, ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳು, ರಸ್ತೆಯಲ್ಲಿ ಪ್ರತಿನಿತ್ಯ ಮೂಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ನಿತ್ಯವೂ ಮಾಂಸದ ಅಂಗಡಿಗಳಲ್ಲಿ ಸಂಗ್ರಹಗೊಳ್ಳುವ ಕೋಳಿ ತ್ಯಾಜ್ಯ ಬಿಸಾಡುತ್ತಿದ್ದರಿಂದ ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ. ಬೈಕ್ ಸವಾರರು, ಮತ್ತು ಪ್ರಯಾಣಿಕರಂತೂ ಕೋಳಿ ಅಂಗಡಿ ಮಾಲೀಕರಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ಕೋಳಿ ತ್ಯಾಜ್ಯ ವಿಲೇವಾರಿಗೆ ಕ್ರಮ ಕೈಗೊಳ್ಳುವುದು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಗ್ರಾಪಂ ಅಭಿವೃದ್ಧಿ ಅಧಿಕಾರಿ ಹಾಗೂ ಆರೋಗ್ಯ ಇಲಾಖೆ ಹಿಂದೇಟು ಹಾಕುತ್ತಿದ್ದಾರೆ, ವಿಷಯ ನಮಗೆ ಸಂಬಂಧವಿಲ್ಲ ಎನ್ನುವಂತೆ ವರ್ತಿಸುತ್ತಿದ್ದಾರೆ.

ಈ ಬಗ್ಗೆ ಇಲಾಖೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ತಮ್ಮ ಮೂಲಕ ಒತ್ತಾಯ ಮಾಡುತ್ತೇನೆ.

**ಹೇಳಿಕೆ:**

ನವಲಿ ಗ್ರಾಮದ ಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಮುಂಭಾಗದಲ್ಲಿ ಘನ ತ್ಯಾಜ್ಯ ನಿರ್ವಹಣೆ ಸಂಬಂಧ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಿಬ್ಬಂದಿಗಳು ಸ್ಥಾನಿಕವಾಗಿ ಭೇಟಿ ನೀಡಿ ಪರಿಶೀಲಿಸಿ ತ್ಯಾಜ್ಯವನ್ನು ಸ್ವಚ್ಛಗೊಳಿಸಿ, ಅಂಗಡಿ ಮಾಲೀಕರಿಗೆ ತ್ಯಾಜ್ಯವನ್ನು ರಸ್ತೆ ಬದಿಗಳಲ್ಲಿ ಹಾಕದಂತೆ ನೋಟಿಸ್ ನೀಡಲಾಗಿದ್ದು, ಒಂದುವೇಳೆ ತ್ಯಾಜ್ಯ ಹಾಕಿದ್ದು ಕಂಡುಬಂದಲ್ಲಿ ದಂಡ ವಿಧಿಸಲಾಗುವುದು ಎಂದು ತಿಳಿಸಲಾಗಿರುತ್ತದೆ. ಹಾಲಿ ತ್ಯಾಜ್ಯವನ್ನು ಗ್ರಾಮ ಪಂಚಾಯತಿಯ ಸ್ವಚ್ಛವಾಹಿನಿ ಮೂಲಕ ಸಂಗ್ರಹಿಸಿ ಸೂಕ್ತ ವಿಲೇವಾರಿ ಮಾಡಲಾಗುತ್ತಿದೆ.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.